೧೬೩ನೇ ಕ್ರಮ (೨೦೫)

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:205ಕ್ಕೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉತ್ತರ

**ಪ್ರಶ್ನೆ:** ಕರ್ನಾಟಕ ರಾಜ್ಯದಲ್ಲಿ ಸುಮಾರು 2 ಕೋಟಿಗೂ ಅಧಿಕ ಯುವಜನರಿದ್ದು, ಯುವಕರ ಸಮಸ್ಯೆಗಳ ಪರಿಹಾರ, ನಾಯಕತ್ವ ಅಭಿವೃದ್ಧಿ ಹಾಗೂ ಪ್ರಜಾಸತಾತ್ಮಕ ಭಾಗವಹಿಸುವಿಕೆಯನ್ನು ಉತ್ತೇಜಿಸಲು ಕೇರಳ, ಅಸಾಂ, ಮಿಜೋರಾಂ ಮತ್ತು ಬಿಹಾರ ರಾಜ್ಯಗಳ ಮಾದರಿಯಲ್ಲೇ ಕರ್ನಾಟಕ ರಾಜ್ಯದಲ್ಲೂ ರಾಜ್ಯ ಯುವ ಆಯೋಗವನ್ನು ಸ್ಥಾಪಿಸುವ ಕುರಿತು.

**ಉತ್ತರ:** ರಾಜ್ಯ ಸರ್ಕಾರವು ಯುವಕರ ಸರ್ವತೋಮುಖ ಬೆಳವಣಿಗೆಗಾಗಿ ವಿವಿಧ ಕ್ರಮಗಳನ್ನು ಕೈಗೊಳ್ಳುತ್ತಿದೆ. ಆರೋಗ್ಯ ಇಲಾಖೆಯ ವತಿಯಿಂದ ಯುವಕ ಯುವತಿಯರ ಆರೋಗ್ಯ ಸಮಸ್ಯೆಗಳು, ಮಾನಸಿಕ ಆರೋಗ್ಯ ಸಮಸ್ಯೆಗಳು, ಮಾದಕ ವಸ್ತುಗಳ ಬಳಕೆಯ ಸಮಸ್ಯೆ ಮತ್ತಿತರ ಸಮಸ್ಯೆಗಳ ಕುರಿತು ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತಿದೆ.

ಕೌಶಲ್ಯಾಭಿವೃದ್ಧಿ ಇಲಾಖೆಯು ಯುವ ಜನತೆಗೆ ಉದ್ಯೋಗ ಮತ್ತು ಉದ್ಯಮಶೀಲತೆಗಾಗಿ ಜಾಗತಿಕ ಗುಣಮಟ್ಟದ ತರಬೇತಿ ನೀಡುವ ಮೂಲಕ ಕೌಶಲ್ಯ ಅಭಿವೃದ್ಧಿ ಒದಗಿಸುತ್ತಿದೆ.

ಮಾಹಿತಿ ತಂತ್ರಜ್ಞಾನ ಇಲಾಖೆಯು ಯುವಕರಿಗೆ ತಂತ್ರಜ್ಞಾನ ತರಬೇತಿ ನೀಡುವ ಮೂಲಕ ಪ್ರಾರಂಭಿಕ ಹಂತದಲ್ಲಿ ಸ್ವಾವಲಂಬಿಗಳಾಗಲು ಸಹಕಾರಿಯಾಗಿದೆ. ಮತ್ತು Startup culture ಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಡಿಜಿಟಲ್ ಸಾಕ್ಷರತೆ, ವೃತ್ತಿ ಮಾರ್ಗದರ್ಶನ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಅದೇ ರೀತಿಯಾಗಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಯುವಕರಿಗೆ ಸಂಬಂಧಪಟ್ಟ ಕಾರ್ಯಕ್ರಮಗಳನ್ನು ಉತ್ತಮ ರೀತಿಯಲ್ಲಿ ಆಯೋಜಿಸಲಾಗುತ್ತಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಂಗ ಸಂಸ್ಥೆಗಳಾದ "ಕರ್ನಾಟಕ ಕ್ರೀಡಾ ಪ್ರಾಧಿಕಾರ", " ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ" ಹಾಗೂ "ಎನ್‌ಎಸ್‌ಎಸ್ ಕೋಶಗಳು" ರಾಜ್ಯದ ಯುವ ಜನಾಂಗದ ಅಭಿವೃದ್ಧಿಯ ಆಶೋತ್ತರಗಳಿಗೆ ಪೂರಕವಾದ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಕೈಗೊಳ್ಳುತ್ತಿವೆ.

ಮೇಲಿನ ಅಂಶಗಳ ಹಿನ್ನಲೆಯಲ್ಲಿ ರಾಜ್ಯದಲ್ಲಿ ಯುವ ಆಯೋಗ ರಚಿಸುವ ಅವಶ್ಯಕತೆ ಕಂಡು ಬರುವುದಿಲ್ಲ.

ರಾಜ್ಯದಲ್ಲಿ ಯುವ ಆಯೋಗವನ್ನು ರಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

**ವೈಎಸ್‌ಡಿ-ಸಿಡಿಎನ್/177/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ